ಶ್ರೀ ಪಾಟೀಲ್ ಎಸ್.ಎಸ್.(ಮುಂಡರಗಿ)126(103)

ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ,

ಅ) ಕೇಂದ್ರ ಸರ್ಕಾರ ಪ್ರತಿಯೊಂದು ರಾಜ್ಯಕ್ಕೆ ಸೆಂಟ್ರಲ್ ಯೂನಿವರ್ಸಿಟಿ ಮಂಜೂರು ಮಾಡಲು ತೀರ್ಮಾನಿಸಿರುವುದು ನಿಜವೇ;

ಆ) ಹಾಗಿದ್ದಲ್ಲಿ, ಕರ್ನಾಟಕ ಯೂನಿವರ್ಸಿಟಿ ಧಾರವಾಡ ಇದನ್ನು ಸೆಂಟ್ರಲ್ ಯೂನಿವರ್ಸಿಟಿಯೆಂದು ಮಾಡಲಾಗುವುದೇ?

ಶ್ರೀ ಡಿ.ಹೆಚ್.ಶಂಕರಮೂರ್ತಿ

ಅ) ಈ ಬಗ್ಗೆ ಕೇಂದ್ರ ಸರ್ಕಾರದಿಂದ ಮಾಹಿತಿ ಸ್ವೀಕೃತವಾಗಿಲ್ಲ.

ಆ) ಉದ್ಭವಿಸುವುದಿಲ್ಲ.

ಶ್ರೀ ಪ್ರಭಾಕರ ಬಂಗೇರ ಕೆ.(ಬೆಳ್ತಂಗಡಿ)127(110)

ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ,

ಅ) ಬೆಳ್ತಂಗಡಿ ತಾಲ್ಲೂಕು ವ್ಯಾಪ್ತಿಯಲ್ಲಿ ಬರುವ ಹಲವಾರು ಗ್ರಾಮ ಪಂಚಾಯತ್ಗಳಿಗೆ ಖಾಯಂ ಕಾರ್ಯದರ್ಶಿಗಳ ನೇಮಕವಾಗಿಲ್ಲವಾದ ಕಾರಣ ಗ್ರಾಮ ಪಂಚಾಯತ್ ಕಾರ್ಯನಿರ್ವಹಣೆಗೆ ಅನಾನುಕೂಲವಾಗಿರುವ ಬಗ್ಗೆ ಸರ್ಕಾರದ ಕ್ರಮಗಳೇನು;

ಆ) ಖಾಯಂ ಕಾರ್ಯದರ್ಶಿಗಳ ಕೊರತೆಯಿಂದಾಗಿ ಇರುವ ಒಬ್ಬ ಕಾರ್ಯದರ್ಶಿ ಹಲವಾರು ಗ್ರಾಮ ಪಂಚಾಯತ್ಗಳಲ್ಲಿ ಕರ್ತವ್ಯ

ನಿರ್ವಹಿಸುತ್ತಿರುವ ಕಾರಣದಿಂದಾಗಿ ಜನರು ತುಂಬಾ ಸಮಸ್ಯೆಗಳನ್ನು ಎದುರಿಸಬೇಕಾಗಿರುವುದನ್ನು ಗಮನಿಸಿ ಕೂಡಲೇ ಖಾಯಂ ಕಾರ್ಯದರ್ಶಿಗಳ ನೇಮಕಕ್ಕೆ ಸರ್ಕಾರ ಕ್ರಮ ಜರುಗಿಸುವುದೇ;

ಇ) ಪ್ರತಿಯೊಂದು ಗ್ರಾಮ ಪಂಚಾಯತ್‌ಗೆ ಒಬ್ಬ ಗ್ರಾಮ ಕರಣೀಕರವರನ್ನು ನೇಮಕ ಮಾಡುವ ಪ್ರಸ್ತಾವ ಸರ್ಕಾರದ ಮುಂದಿದೆಯೇ?

ಶ್ರೀ ಸಿ.ಎಂ.ಉದಾಸಿ

ಅ) ಒಟ್ಟು 3 ಹುದ್ದೆಗಳು ಖಾಲಿ ಇರುತ್ತವೆ.

ಖಾಲಿ ಹುದ್ದೆಗಳಿಗೆ ಪ್ರಭಾರಿ ವ್ಯವಸ್ಥೆ ಮಾಡಲಾಗಿದೆ

ಆ) ಪ್ರಸ್ತುತ ಖಾಲಿ ಇರುವ 3 ಹುದ್ದೆಗಳಿಗೆ ಈಗ ಪ್ರಭಾರಿ ವ್ಯವಸ್ಥೆ ಮಾಡಲಾಗಿದ್ದು, ಈ ಹುದ್ದೆಗಳನ್ನು ನಿಯಮಾನುಸಾರ ಶೀಘ್ರವಾಗಿ ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುತ್ತಿದೆ.

ಇ) ಇಲ್ಲಾ.

ಶ್ರೀ ಪ್ರಭಾಕರ ಬಂಗೇರ ಕೆ.(ಬೆಳ್ತಂಗಡಿ)128(325)

ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ,

ಅ) ಪ್ರೌಢ ಶಾಲೆಗಳಲ್ಲಿ ಅಕ್ಷರ ದಾಸೋಹ ವಿಸ್ತರಣೆ ಕುರಿತು ವಿವರಗಳೇನು?

ಆ) ಈ ಯೋಜನೆಯ ಜಾರಿಯ ವ್ಯವಸ್ಥೆಯನ್ನು ಯಾವ ಸಂಸ್ಥೆಗಳಿಗೆ ವಹಿಸಿಕೊಡಲಾಗಿದೆ.